ಶಿವಮೊಗ್ಗ ನಗರದ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ವಸೂಲಿ ಮಾಡುತ್ತಿರುವ ಡೋನೇಷನ್ ಹಾವಳಿ

449 (340) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಶಿವಮೊಗ್ಗ ನಗರದ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ವಸೂಲಿ ಮಾಡುತ್ತಿರುಲಾವ ಡೋನೇಷನ್ ಹಾವಳಿ ತಡೆಯುವಲ್ಲಿ ಸರ್ಕಾರ ಯಾವ ಕ್ರಮಕೈಗೊಂಡಿದೆ; ಇದುವರೆಗೂ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; ಹಾಗೂ ಇಂತಹ ಎಷ್ಟು ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ; ವಿವರ ತಿಳಿಸುವುದು;

ಪ್ರೊ.ಬಿ.ಕೆ. ಚಂದ್ರಶೇಖರ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

2. ಶಿವಮೊಗ್ಗ ನಗರದ ಖಾಸಗಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ನಿಗಧಿತ ಶುಲ್ಕವನ್ನು ಮಾತ್ರ ವಸೂಲಿ ಮಾಡುವ ಬಗ್ಗೆ ಸುತ್ತೋಲೆ ನೀಡಲಾಗಿದ್ದು ಸದರಿ ಶಾಲೆಗಳಲ್ಲಿ ಮಂತಿಗೆ (ಡೋನೇಷನ್) ಪಡೆದ ಬಗ್ಗೆ ಇಲಾಖೆಗೆ ಯಾವುದೇ ಲಿಖಿತ ದೂರುಗಳು ಬಂದಿರುವುದಿಲ್ಲ. ಹೀಗಾಗಿ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಶಿವಮೊಗ್ಗ ನಗರದ ಪದವಿ ಪೂರ್ವ ಕಾಲೇಜುಗಳಲ್ಲಿ ವಸೂಲಿ ಮಾಡುತ್ತಿರುವ ಡೊನೇಷನ್ ಹಾವಳಿ

450 (342) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಶಿವಮೊಗ್ಗ ನಗರದ ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ವಸೂಲಿ ಮಾಡುತ್ತಿರುವ ಡೋನೇಷನ್ ಹಾವಳಿ ತಡೆಯುವಲ್ಲಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ? ಇದುವರೆವಿಗೂ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಹಾಗೂ ಇಂತಹ ಎಷ್ಟು ಸಂಸ್ಥೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ. ವಿವರ ತಿಳಿಸುವುದು.

ಶ್ರೀ ಚಂದ್ರಶೇಖರಪ್ಪ.ಹೆಚ್.ಎಂ. (ಶಿವಮೊಗ್ಗ):

1. ಡೊನೇಷನ್ ಹಾವಳಿ ತಡೆಯಲು ಹಾಗೂ ಪ್ರವೇಶದಲ್ಲಿ ಹೆಚ್ಚಿನ ಪಾರದರ್ಶಕತೆ ತರಲು ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯದಿಂದ ದಿ:22.5.02 ರಂದು ಸುತ್ತೋಲೆಯನ್ನು ಹೊರಡಿಸಲಾಗಿದೆ. ಅಲ್ಲದೆ ದಿ:22.5.02 ರಂದು ಪ್ರತಿ ಕಾಲೇಜಿನವರು ತೆಗೆದುಕೊಳ್ಳಬೇಕಾದ ಶುಲ್ಕದ ವಿವರಗಳನ್ನು ಸಹ ತಿಳಿಸಲಾಗಿದೆ ಮತ್ತು ಶುಲ್ಕದ ವಿವರವನ್ನು ದಾಖಲಾತಿ ಸಮಯದಲ್ಲಿ ಪ್ರದರ್ಶಿಸಲು ನಿರ್ದೇಶನ ನೀಡಲಾಗಿದೆ.

ವಿದ್ಯಾರ್ಥಿಗಳ ದಾಖಲಾತಿಯನ್ನು ಗಳಿಸಿದ ಅಂಕಗಳ ಆಧಾರದ ಮೇಲೆ ಮೀಸಲಾತಿ ನಿಯಮದನ್ವಯ ಮಾಡಲು ತಿಳಿಸಿದೆ. ವಿದ್ಯಾರ್ಥಿಯು ಗಳಿಸಿದ ಅಂಕಗಳನ್ನು ಸೂಚನಾ ಫಲಕದ ಮೇಲೆ ಪ್ರಕಟಿಸಲು ಸಹ ಸೂಚಿಸಲಾಗಿದೆ.